# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್ ಕಛೇರಿ ಬೆಂಗಳೂರು**

**ದಿನಾಂಕ: 21-01-2023 ರಂದು ಬೆಳಗ್ಗೆ 10:30 ಗಂಟೆಗೆ ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್)
3. ಘನತ್ಯಾಜ್ಯ ವಿಲೇವಾರಿ ಸೂಪರ್‌ವೈಸರ್‌ಗಳು.
4. 7ನೇ ಬ್ಲಾಕ್ ಜಯನಗರ ಮತ್ತು ಬನಶಂಕರಿ 2ನೇ ಹಂತದ ನಿವಾಸಿಗಳ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

*********

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್‌ನ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ಕಾರ್ಯಗತಗೊಳ್ಳದ ಕೆಲಸಕಾರ್ಯಗಳನ್ನು ಅಧಿಕಾರಿಗಳು ನಿಗಧಿತ ಅವಧಿಯೊಳಗೆ ಕಡ್ಡಾಯವಾಗಿ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಲಾಯತು.

ಮುಂದುವರೆದು, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಜಲಮಂಡಳಿ ಮತ್ತು ಒಳಚರಂಡಿ ವಿಭಾಗ ರವರಿಂದ ಕಾಮಗಾರಿ ನಡೆಯುತ್ತಿದ್ದು ಸಾರ್ವಜನಿಕರ ಸಂಚಾರಕ್ಕೆ ತುಂಬಾ ಕಷ್ಟಕರವಾಗಿರುತ್ತದೆ. ಸದರಿ ಕಾಮಗಾರಿಯನ್ನು ಆದಷ್ಟು ವೇಗವಾಗಿ ಮುಗಿಸಿಕೊಡೊಲು ಸಾರ್ವಜನಿಕರು ಕೋರಿದರು.
- ಜಯನಗರ 7ನೇ ಬ್ಲಾಕ್‌ನ ಸರಸ್ವತಿ ಬ್ಯಾಂಕ್ ಹತ್ತಿರದ 3ನೇ ಅಡ್ಡರಸ್ತೆಯಲ್ಲಿ ಕುಡಿಯುವ ನೀರಿನ ಪೈಪ್ ಲೀಕ್ ಆಗುತ್ತಿರುತ್ತದೆ. ಸದರಿ ಪೈಪ್ ಅನ್ನು ಸರಿಪಡಿಸಿಕೊಡಲು ಸಾರ್ವಜನಿಕರು ಕೋರಿದರು.

**ಕ್ರಮ: ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ.**

- ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡಲು ಒಂದು ಬಾರಿ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮಾಡಲು ಸಾರ್ವಜನಿಕರು ಕೋರಿದರು.

**ಕ್ರಮ: ಸ.ಕಾ.ನಿ.ಅ (ಘನತ್ಯಾಜ್ಯ)**

**ಪು.ತಿ.ನೋ**

* ವಾರ್ಡ್ ವ್ಯಾಪ್ತಿಯಲ್ಲಿ ಪಾದಾಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ. ಅದರಿಂದ ಪಾದಾಚಾರಿಗಳಿಗೆ ಓಡಾಡಲು ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ ಸದರಿ ಪಾದಾಚಾರಿ ಮಾರ್ಗಗಳ ಒತ್ತುವರಿಯನ್ನು ತೆರವುಗೊಳಿಸಬೇಕೆಂದು ಸಾರ್ವಜನಿಕರು ಕೋರಿದರು.

* ವಾರ್ಡ್ ವ್ಯಾಪ್ತಿಯ ಬಸ್ ತಂಗುದಾಣಗಳ ಹತ್ತಿರ ಪಾದಚಾರಿ ಮಾರ್ಗದ ಮೇಲೆ ತಳ್ಳುಗಾಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿರುತ್ತಾರೆ. ಇದರಿಂದ ಪಾದಾಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ. ಸದರಿ ತಳ್ಳುಗಾಡಿಗಳನ್ನು ತೆರವುಗೊಳಿಸಬೇಕೆಂದು ಸಾರ್ವಜನಿಕರು ಕೋರಿದರು.

**ಕ್ರಮ: ಸಹಾಯಕ ಅಭಿಯಂತರರು, ಕಾಮಗಾರಿ ಇಲಾಖೆ.**

* ವಾರ್ಡ್ ವ್ಯಾಪ್ತಿಯ ಸುತ್ತಾಮುತ್ತಾ ಇರುವ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲ. ಸದರಿ ಎಲ್ಲಾ ಬೀದಿ ದೀಪಗಳನ್ನು ಸರಿಪಡಿಸಬೇಕೆಂದು ಸಾರ್ವಜನಿಕರು ಕೋರಿದರು.

* **ಕ್ರಮ: ವಿದ್ಯುತ್–ಯೋಜನೆ, ದಕ್ಷಿಣ**

* ವಾರ್ಡ್ ವ್ಯಾಪ್ತಿಯ ಸುತ್ತಾಮುತ್ತಾ ಇರುವ ಬೀದಿ ದೀಪಗಳಿಗೆ ಅಡ್ಡ ಇರುವ ಮರದ ಕೊಂಬೆಗಳನ್ನು ತೆರವು ಮಾಡಬೇಕೆಂದು ಸಾರ್ವಜನಿಕರು ಕೋರಿದರು.

* **ಕ್ರಮ: ಅರಣ್ಯಾಧಿಕಾರಿಗಳು.**

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 201